# ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1047

ಸದಸ್ಯರ ಹೆಸರು : ಶ್ರೀ ಕೆ. ಹರೀಶ್ ಕುಮಾರ್
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 22.09.2022

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ಸರ್ಕಾರ ಕಾರ್ಯನಿರತ ಪತ್ರಕರ್ತರ ಸಂಘಗಳ ಯಾವ ಯಾವ ಬೇಡಿಕೆಗಳನ್ನು ಈಡೇರಿಸಿದೆ; ಈಡೇರಿಸಲು ಬಾಕಿ ಇರುವ ಬೇಡಿಕೆಗಳು ಯಾವುವು; | ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೇಡಿಕೆಗಳನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪರಿಮಿತಿಯಲ್ಲಿ ಪರಿಶೀಲಿಸಿದ್ದು, ಬಹುತೇಕ ಬೇಡಿಕೆಗಳನ್ನು ಸರ್ಕಾರದ ನಿಯಮಗಳನ್ವಯ ಈಡೇರಿಸಲಾಗಿದೆ. ಈಗಾಗಲೇ ಸಂಘದ ಸದಸ್ಯರುಗಳಿಗೆ ನಿಯಮಾನುಸಾರ ಮಾಧ್ಯಮ ಮಾನ್ಯತಾ ಪತ್ರವನ್ನು ನೀಡಲಾಗುತ್ತಿದೆ. ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಎಲ್ಲಾ ಶ್ರೇಣಿಗಳ ಎಲ್ಲಾ ಬಸ್ಸುಗಳಲ್ಲಿ ರಾಜ್ಯಾದ್ಯಂತ ಉಚಿತವಾಗಿ ಪ್ರಯಾಣಿಸಲು ಅನುಕೂಲವಾಗುವಂತೆ ಸ್ಮಾರ್ಟ್‌ಕಾರ್ಡ್ ವಿತರಿಸಲಾಗುತ್ತಿದೆ. ಸಂಕಷ್ಟದಲ್ಲಿರುವ ನಿವೃತ್ತ ಪತ್ರಕರ್ತರಿಗೆ ನಿಯಮಾನುಸಾರ ಮಾಸಾಶನ ಸೌಲಭ್ಯವನ್ನು ನೀಡಲಾಗುತ್ತಿದೆ.<br><br>ಮುಂದುವರೆದು, ನಗದು ರಹಿತ ಉಚಿತ ವೈದ್ಯಕೀಯ ಸೇವೆ ಒದಗಿಸುವ ಆಯುಷ್ಮಾನ್ ಭಾರತ್ ಮತ್ತು ಆರೋಗ್ಯ ಕರ್ನಾಟಕ ಯೋಜನೆಯನ್ನು ರಾಜ್ಯ ಸರ್ಕಾರವು ಈಗಾಗಲೇ ಅನುಷ್ಠಾನಗೊಳಿಸಿದೆ. ಈ ಯೋಜನೆಯನ್ನು ಕೇವಲ ಪತ್ರಕರ್ತರು ಮಾತ್ರವಲ್ಲದೇ ಪತ್ರಕರ್ತರ ಕುಟುಂಬ ವರ್ಗದವರಿಗೂ ವಿಸ್ತರಿಸಲಾಗಿದೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿನ ಮಾಧ್ಯಮ ಪಟ್ಟಿಯಲ್ಲಿರುವ ಎಲ್ಲಾ ಪತ್ರಕರ್ತರೇತರ ಪೂರ್ಣಕಾಲಿಕ ಸಿಬ್ಬಂದಿಗೂ ಈ ಯೋಜನೆಯನ್ನು ವಿಸ್ತರಿಸಲಾಗಿದ್ದು, ಪ್ರಸ್ತುತ ಸದರಿ ಯೋಜನೆಯನ್ನು ಮಾಧ್ಯಮ ಪಟ್ಟಿಯಲ್ಲಿ ಇಲ್ಲದ ಪತ್ರಕರ್ತರು ಹಾಗೂ ಪತ್ರಕರ್ತರೇತರರಿಗೂ ವಿಸ್ತರಿಸುವ ಯೋಜನೆಯು ಸರ್ಕಾರದ ಪರಿಶೀಲನೆಯಲ್ಲಿದೆ.<br><br>ಪ್ರಸ್ತುತ ಚಾಲ್ತಿಯಲ್ಲಿರುವ, ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ನೀಡುತ್ತಿರುವ ಮಾಸಾಶನ ಯೋಜನೆಯ ನಿಯಮಗಳನ್ನು ಪರಿಷ್ಕರಿಸಲು ಸಮಿತಿಯೊಂದನ್ನು ರಚಿಸುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ. |

| | | |
|---|---|---|
| (ಆ) | ದಕ್ಷಿಣ ಕನ್ನಡ ಜಿಲ್ಲೆಯ ಗಡಿಭಾಗದ ಕಾಸರಗೋಡಿನ ಕನ್ನಡ ದಿನಪತ್ರಿಕೆಗಳ ಪತ್ರಕರ್ತರಿಗೆ ಕಾಸರಗೋಡು-ಮಂಗಳೂರು ನಡುವೆ ಉಚಿತ ಬಸ್ ಪಾಸ್ ಬೇಡಿಕೆಯಿದ್ದು, ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು? | ಕಾಸರಗೋಡು-ಮಂಗಳೂರು ನಡುವೆ ಸಂಚರಿಸುತ್ತಿರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ಸುಗಳಲ್ಲಿ ಪಾಸ್ ವ್ಯವಸ್ಥೆ ಇಲ್ಲದೇ ಇರುವ ಹಿನ್ನೆಲೆಯಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸಾಧ್ಯವಾಗುತ್ತಿಲ್ಲ. |

KCI-PIP/199/2022-INFO-KC-SEC

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ